# Akashvani : Bangalore
# Regional Bulletin In Kannada
# 24.09.2025 / 2.30 pm

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

೧. ಮಂಗಳೂರಿನಲ್ಲಿ ಬಂಡವಾಳ ಹೂಡಿಕೆ ಪ್ರಸ್ತಾವನೆ ನೀಡಿದ ಸಚಿವ ಪ್ರಿಯಾಂಕ್ ಖರ್ಗೆ ಕರೆ

೨. ಬೆಂಗಳೂರಿನಲ್ಲಿ ರಸ್ತೆಗುಂಡಿ ಸಮಸ್ಯೆ - ವಿವಿಧೆಡೆ ಬಿಜೆಪಿ ರಸ್ತೆ ತಡೆ, ಪ್ರತಿಭಟನೆ

೩. ಶಾಸಕ ಭೈರತಿ ಬಸವರಾಜು ಬಂಧನ ವಿನಾಯಿತಿ ರದ್ದುಗೊಳಿಸುವಂತೆ ಉಚ್ಛ ನ್ಯಾಯಾಲಯಕ್ಕೆ ಸಿಐಡಿ ಮನವಿ

೪. ಮಹಾರಾಷ್ಟ್ರದಲ್ಲಿ ಧಾರಾಕಾರ ಮಳೆ ; ರಾಜ್ಯದ ಕೃಷ್ಣಾನದಿ ಪಾತ್ರದ  ಜಿಲ್ಲೆಗಳು ಜಲಾವೃತ

*******************

ಮಂಗಳೂರಿನ ಸಮಗ್ರ ಅಭಿವೃದ್ಧಿಗೆ ರಾಜ್ಯ ಸರ್ಕಾರ ಅಗತ್ಯ ನೆರವು ಒದಗಿಸಲಿದೆ ಎಂದು ಮಾಹಿತಿ ತಂತ್ರಜ್ಞಾನ ಹಾಗೂ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ಬಿಯಾಂಡ್ ಬೆಂಗಳೂರಿನ ಭಾಗವಾಗಿ ಮಂಗಳೂರಿನಲ್ಲಿಂದು ನಡೆದ ಮಂಗಳೂರು ಟೆಕ್ನೋವಾಂನ್ಜಾ ಐದನೇ ಆವೃತ್ತಿಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರಾಜ್ಯದಲ್ಲಿ ಬೆಂಗಳೂರು ಬಿಟ್ಟರೆ ಅತೀ ವೇಗವಾಗಿ ಬೆಳೆಯುತ್ತಿರುವ ನಗರವಾಗಿ ಮಂಗಳೂರು ಗುರುತಿಸಿಕೊಂಡಿದೆ. ಇಲ್ಲಿ ಹೂಡಿಕೆಗೆ ಸಾಕಷ್ಟು ಅವಕಾಶಗಳಿದ್ದು, ಉದ್ದಿಮೆದಾರರು ಹೂಡಿಕೆ ಮಾಡುವಂತೆ ಎಂದು ಕರೆ ನೀಡಿದ್ದಾರೆ. ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಮಾತನಾಡಿ, ಮಂಗಳೂರು ಸಾಧ್ಯತೆಗಳ ಸಾಗರವಾಗಿದೆ. ಸಮುದ್ರ ತೀರ, ವಿಮಾನ ನಿಲ್ದಾಣ, ಬಂದರು, ರೈಲ್ವೆ ಎಲ್ಲಾ ಸೌಕರ್ಯಗಳಿದ್ದು ಸಮಗ್ರ ಅಭಿವೃದ್ಧಿಗೆ ಪೂರಕ ವಾತಾವರಣವಿದೆ. ಹೂಡಿಕೆದಾರರಿಗೆ ಅಗತ್ಯ ನೆರವು ನೀಡಲು ಬದ್ಧ ಎಂದು ಹೇಳಿದ್ದಾರೆ. ಮಂಗಳೂರು ಟೆಕ್ನೋವಾನ್ಜಾದಲ್ಲಿ ೬೦೦ಕ್ಕೂ ಅಧಿಕ ಪ್ರತಿನಿಧಿಗಳು, ೪೦ ಕ್ಕೂ ಅಧಿಕ ಜಾಗತಿಕ ಭಾಷಣಕಾರರು, ೭೦ಕ್ಕೂ ಅಧಿಕ ಸ್ಟಾರ್ಟ್ ಅಪ್ ಪ್ರತಿನಿಧಿಗಳು, ಸುಮಾರು ೨೦ ರಷ್ಟು ಮಂದಿ ಹೂಡಿಕೆದಾರರು ಭಾಗವಹಿಸಿದ್ದರು.

******************

ಬೆಂಗಳೂರಿನ ರಸ್ತೆ ಗುಂಡಿUಳು ಹಾಗೂ ಮೂಲಭೂತ ಸೌಕರ್ಯಕ್ಕೆ ಆಗ್ರಹಿಸಿ  ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾದ್ಯಂತ ಪ್ರತಿಭಟನೆ ಹಮ್ಮಿಕೊಂಡಿದೆ. ಬೆಂಗಳೂರಿನಲ್ಲಿ ಪಕ್ಷದ ಶಾಸಕರು ಹಾಗೂ

ಕಾರ್ಯಕರ್ತರು ರಸ್ತೆಗಳನ್ನು ತಡೆದು ಪ್ರತಿಭಟನೆ ನಡೆಸಿದರು. ಯಲಹಂಕದಲ್ಲಿ ಶಾಸಕ ಎಸ್.ಆರ್.ವಿಶ್ವನಾಥ್ ನೇತೃತ್ವದಲ್ಲಿ ರಸ್ತೆ ತಡೆ ನಡೆಸಿ, ಗುಂಡಿಗಳನ್ನು ಮುಚ್ಚುವ ಅಭಿಯಾನ ನಡೆಸಿದರು. ಮಹಾಲಕ್ಷ್ಮೀ ಲೇಔಟ್‌ನಲ್ಲಿ ಮಾಜಿ ಶಾಸಕ ಎಲ್. ನರೇಂದ್ರ ಬಾಬು ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು. ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ ನೇತೃತ್ವದಲ್ಲಿ ಕಾರ್ಯಕರ್ತರು ಬಸವನ ಗುಡಿಯಲ್ಲಿ ಪ್ರತಿಭಟನೆ ನಡೆಸಿದರು.

*******************

ರೌಡಿಶೀಟರ್ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಶಾಸಕ ಭೈರತಿ ಬಸವರಾಜು ಬಂಧನ ವಿನಾಯಿತಿ ರದ್ದುಗೊಳಿಸುವಂತೆ ಕೋರಿ ಅಪರಾಧ ತನಿಖಾ ಇಲಾಖೆ ಉಚ್ಚ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದೆ. ಮಾಜಿ ಸಚಿವ ಭೈರತಿ ಬಸವರಾಜು ಬೆಂಗಳೂರಿನ ಕೆ.ಆರ್. ಪುರಂ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ. ಪ್ರಕರಣದಲ್ಲಿ ಶಾಸಕ ಭೈರತಿ ಬಸವರಾಜು ಅವರ ಬಂಧನ ಅಗತ್ಯವಾಗಿದೆ ಹಾಗೂ ಹೈಕೋರ್ಟ್ ಅವರಿಗೆ ಬಂಧನದಿಂದ ವಿನಾಯಿತಿ ನೀಡುವ ಮಧ್ಯಂತರ ಆದೇಶವನ್ನು ರದ್ದುಗೊಳಿಸಬೇಕು ಎಂದು ವಿಶೇಷ ಸಾರ್ವಜನಿಕ ಅಭಿಯೋಜಕ ಬಿ.ಎನ್. ಜಗದೀಶ್ ಮನವಿ ಮಾಡಿದ್ದಾರೆ.

*******************

ಮಹಾರಾಷ್ಟ್ರದಲ್ಲಿ ಧಾರಕಾರ ಮಳೆಯಾಗುತ್ತಿರುವುದರಿಂದ ಉಜನಿ ಆಣೆಕಟ್ಟೆಯಿಂದ ಹರಿದು ಬರುತ್ತಿರುವ ನೀರಿನಿಂದಾಗಿ ಯಾದಗಿರಿ ನಗರದ ಭೀಮಾ ನದಿ ತುಂಬಿ ಹರಿಯುತ್ತಿದೆ. ಉಜಿನಿ ಜಲಾಶಯದಿಂದ ೧.೫೪ ಲಕ್ಷ ಕ್ಯೂಸೆಕ್ ನೀರು ಹರಿ ಬಿಡಲಾಗುತ್ತಿದೆ. ಇದರಿಂದ ಸನ್ನತಿ ಬ್ರಿಡ್ಜ್ ಕಂ ಬ್ಯಾರೇಜ್ ನಿಂದಲೂ ೩.೫೦ ಲಕ್ಷ ಕ್ಯೂಸೆಕ್ ನೀರು ನದಿಗೆ ಹರಿಬಿಡಲಾಗಿದೆ. ಕ್ರಸ್ಟ್ ಗೇಟ್‌ಗಳನ್ನು ಮೇಲಕ್ಕೆ ಎತ್ತಿ ನೀರು ಹರಿಸಲಾಗುತ್ತಿದೆ. ಇದರಿಂದ ನದಿ ಪಾತ್ರದ ಎರಡೂ ಕಡೆಯ ಜಮೀನುಗಳಿಗೆ ನೀರು ನುಗ್ಗಿದೆ. ಹಳ್ಳಗಳಿಗೂ ಪ್ರವಾಹದ ನೀರು ವ್ಯಾಪಿಸಿಕೊಂಡು ಬೆಳೆದು ನಿಂತ ಭತ್ತ, ಹತ್ತಿ, ತೊಗರಿ ಬೆಳೆಗಳು ಜಲಾವೃತವಾಗಿದೆ. ೩.೫೦ ಲಕ್ಷ ಕ್ಯೂಸೆಕ್ ನೀರು ನದಿಗೆ ಹರಿಸುತ್ತಿರುವುದರಿಂದ ಹೆಡಗಿಮದ್ರಾ, ತಳಕ, ಮುಷ್ಟುರು, ಮಲ್ಹಾರ್, ಆನೂರು, ಗೌಡೂರು, ಹನೂರು (ಕೆ), ಭೀಮನಳ್ಳಿ ಸೇರಿದಂತೆ ನದಿ ಪಾತ್ರದ ಗ್ರಾಮಗಳ ಜಮೀನುಗಳಿಗೆ ನೀರು ನುಗ್ಗಿದೆ ಎಂದು ಯಾದಗಿರಿ ತಹಶೀಲ್ದಾರ್ ಸುರೇಶ ಅಂಕಲಗಿ ತಿಳಿಸಿದ್ದಾರೆ. ಜನರು ನದಿ, ಹಳ್ಳಗಳಿಗೆ ಇಳಿಯಬಾರದು ಎಂದು ನಗರಸಭೆ ಅಧ್ಯಕ್ಷೆ ಲಲಿತಾ ಮನವಿ ಮಾಡಿದ್ದಾರೆ. ಶೀಘ್ರವೇ ರೈತರಿಗೆ ಸೂಕ್ತ ಪರಿಹಾರ ಕಲ್ಪಿಸಲಾಗುವುದು ಎಂದು ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ತಿಳಿಸಿದ್ದಾರೆ. ವಡಗೇರಾ ತಾಲ್ಲೂಕಿನ ಜೋಳದಡಗಿ, ಶಿವನೂರು ಗ್ರಾಮದಲ್ಲಿ ಬೆಳೆ ಹಾನಿ ಪ್ರದೇಶಕ್ಕೆ ಭೇಟಿ ನೀಡಿ ಮಾತನಾಡಿದ ಅವರು, ಭೀಮಾನದಿಗೆ ೩.೫೦ ಲಕ್ಷ ಕ್ಯೂಸೆಕ್ ನೀರು ಬಿಟ್ಟಿದ್ದರಿಂದ ಯಾದಗಿರಿ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯ ೧೨ಕ್ಕೂ ಹೆಚ್ಚು ಗ್ರಾಮಗಳಲ್ಲಿನ ಬೆಳೆ ಹಾನಿಯಾಗಿದೆ. ಸಮೀಕ್ಷೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು

ಸ್ಪಷ್ಟಪಡಿಸಿದ್ದಾರೆ. ಹೆಚ್ಚಿನ ಬೆಳೆ ಪರಿಹಾರಕ್ಕಾಗಿ ಯಾದಗಿರಿ ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ ಮಾಡಲಾಗುವುದು ಎಂದು ಯಾದಗಿರಿ ಜಿಲ್ಲೆಯ ಗುರುಮಠಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ್ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

*******************

ಪೋಷಣ್ ಅಭಿಯಾನವು ಮಕ್ಕಳ ಭವಿಷ್ಯವನ್ನು ಬದಲಾಯಿಸುವ ಶಕ್ತಿಯುತ ಕಾರ್ಯಕ್ರಮವಾಗಿದೆ ಎಂದು ಧಾರವಾಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಭುವನೇಶ್ ಪಾಟೀಲ ಹೇಳಿದ್ದಾರೆ. ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಮತ್ತು ಆರೋಗ್ಯ ಸಿಬ್ಬಂದಿ ಒಟ್ಟಾಗಿ ಪೋಷಣ್ ಕಾರ್ಯದಲ್ಲಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಇದರಿಂದ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ. ಪೋಷಣ್ ಅಭಿಯಾನವು ಕೇವಲ ಒಂದು ದಿನಕ್ಕೆ ಮಾತ್ರ ಸೀಮಿತವಾಗಬಾರದು. ಶೇಕಡಾ ೧೦೦ರಷ್ಟು ಮಕ್ಕಳಿಗೂ ತಾಯಿ ಹಾಲು, ಶೇಕಡಾ ೧೦೦ರಷ್ಟು ಗರ್ಭಿಣಿಯರಿಗೂ ಪೌಷ್ಠಿಕಾಹಾರ ದೊರಕಬೇಕು ಎಂದು ಹೇಳಿದ್ದಾರೆ.

*******************

ಕನ್ನಡ ನಾಡಿನ ಜೀವನದಿ "ಕಾವೇರಿ ಆರತಿ" ಕೆ.ಆರ್.ಎಸ್‌ನಲ್ಲಿ ಇದೇ ೨೬ ರಿಂದ ಆಯೋಜಿಸಲಾಗಿದೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾವೇರಿ ನದಿಗೆ ಪುಷ್ಪಾರ್ಚನೆ ಮಾಡುವ ಮೂಲಕ "ಕಾವೇರಿ ಆರತಿ" ಕಾರ್ಯಕ್ರಮಕ್ಕೆ ಶಾಸ್ತ್ರೋಕ್ತವಾಗಿ ಚಾಲನೆ ನೀಡಲಿದ್ದಾರೆ ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚೆಲುವರಾಯಸ್ವಾಮಿ ಮಾಹಿತಿ ನೀಡಿದ್ದಾರೆ. ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯದ ವಿವಿಧ ಮಠಗಳ ಸ್ವಾಮೀಜಿಗಳು, ಹಾಗೂ ಜನಪ್ರತಿನಿಧಿಗಳು ಕಾವೇರಿ ಆರತಿಯಲ್ಲಿ ಪಾಲ್ಗೊಳ್ಳಲಿದ್ದಾರೆ.

*******************

ಭಾರತ ಮತ್ತು ಬಹರೈನ್ ನಡುವಿನ ದ್ವಿಪಕ್ಷೀಯ ಆರ್ಥಿಕ ಸಂಬಂಧಗಳನ್ನು ಬಲಪಡಿಸುವಲ್ಲಿ ಮಹತ್ವದ ಮೈಲಿಗಲ್ಲು ಸ್ಥಾಪಿಸಲು ಏಷ್ಯಾ-ಅರಬ್ ವಾಣಿಜ್ಯ ಮಂಡಳಿಯು ಡಾ. ಕೆ.ಜೆ. ಪುರುಷೋತ್ತಮ್ ಅವರನ್ನು ಗೌರವ ವ್ಯಾಪಾರ ಆಯುಕ್ತರನ್ನಾಗಿ ನೇಮಕ ಮಾಡಿದೆ.

ಬಹರೈನ್ ರಾಯಭಾರ ಕಚೇರಿ ಮತ್ತು ಪ್ರಮುಖ ಪ್ರಾದೇಶಿಕ ಸಂಸ್ಥೆಗಳೊಂದಿಗೆ ನಿಕಟ ಸಹಯೋಗದೊಂದಿಗೆ ಕಾರ್ಯನಿರ್ವಹಿಸುತ್ತಿರುವ ಏಷ್ಯಾ-ಅರಬ್ ವಾಣಿಜ್ಯ ಮಂಡಳಿಯು ಗಡಿಯಾಚೆಗಿನ ವ್ಯಾಪಾರ ಸೌಲಭ್ಯ, ಹೂಡಿಕೆ ಪ್ರಚಾರ ಮತ್ತು ಉದ್ಯಮಶೀಲತಾ ಉದ್ಯಮಗಳ ಮೇಲೆ ಕೇಂದ್ರೀಕರಿಸಲಿದೆ.

*******************

ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಸ್ಕ್ಯಾನಿಂಗ್ ನಡೆಸಲು ರೋಗಿಯ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕು. ತಪ್ಪಿದ್ದಲ್ಲಿ ಅಂತಹ ಕೇಂದ್ರಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ದಕ್ಷಿಣ ಕನ್ನಡ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಚ್.ಆರ್ ತಿಮ್ಮಯ್ಯ

ಎಚ್ಚರಿಕೆ ನೀಡಿದ್ದಾರೆ. ಜನನ ಪೂರ್ವ ಲಿಂಗ ನಿರ್ಣಯ ತಡೆ ಕಾಯಿದೆ ೧೯೯೪ಕ್ಕೆ ಸಂಬಂಧಿಸಿದ ಜಿಲ್ಲಾ ಮಟ್ಟದ ಸಲಹಾ ಸಮಿತಿಯ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಒಟ್ಟು ೧೮೯ ಸ್ಕ್ಯಾನಿಂಗ್ ಸೆಂಟರ್ ಗಳು ಕಾರ್ಯನಿರ್ವಹಿಸುತ್ತಿದೆ. ಈ ಪೈಕಿ ೧೨ ಸರಕಾರಿ ಹಾಗೂ ೧೭೭ ಖಾಸಗಿ ಕೇಂದ್ರಗಳಾಗಿವೆ. ಸ್ಕ್ಯಾನಿಂಗ್ ವೇಳೆ ಗುರುತಿನ ಚೀಟಿಯನ್ನು ನಿಖರವಾಗಿ ಪರಿಶೀಲಿಸಬೇಕು. ಸ್ಕ್ಯಾನಿಂಗ್ ಕೇಂದ್ರಗಳಲ್ಲಿ ವರದಿಗಳಿಗೆ ಆಯಾ ತಜ್ಞ ವೈದ್ಯರುಗಳೇ ಸಹಿ ಹಾಕಬೇಕು. ಸಿಬ್ಬಂದಿ ಸಹಿ ಹಾಕುವಂತಿಲ್ಲ ಎಂದು ತಿಳಿಸಿದ್ದಾರೆ.

******************

ಕೋಲಾರದಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ರಾಗಿ ಖರೀದಿಸಲು ಅಕ್ಟೋಬರ್ ೧ರಿಂದ ನೋಂದಣಿ ಪ್ರಕ್ರಿಯೆ ಶುರುವಾಗಲಿದೆ. ನೋಂದಣಿ ಪ್ರಕ್ರಿಯೆಗೆ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ ಸೂಚಿಸಿದ್ದಾರೆ. ರೈತರಿಂದ ರಾಗಿ ಖರೀದಿಸಲು ಪೂರ್ವ ಸಿದ್ಧತಾ ಕ್ರಮಗಳ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರತಿ ಕ್ವಿಂಟಾಲ್ ರಾಗಿಗೆ ೪ ಸಾವಿರದ ೮೮೬ ರೂಪಾಯಿ ಬೆಂಬಲ ಬೆಲೆಯನ್ನು ಸರ್ಕಾರ ನಿಗದಿ ಪಡಿಸಿದೆ. ತೂಕ ಮತ್ತು ಗುಣಮಟ್ಟದಲ್ಲಿ ಲೋಪ ಆಗದಂತೆ ನೋಡಿಕೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ. ಮುಳಬಾಗಿಲು ತಾಲೂಕಿನಲ್ಲಿ ಹೆಚ್ಚಾಗಿ ಭತ್ತ ಬೆಳೆಯುವುದರಿಂದ ಭತ್ತ ಖರೀದಿ ಕೇಂದ್ರ ಪ್ರಾರಂಭಿಸಲು ನಿರ್ಧರಿಸಿದ್ದು ಜಿಲ್ಲೆಯ ಯಾವುದೇ ಭಾಗದ ರೈತರು ತಾವು ಬೆಳೆದಂತಹ ಭತ್ತವನ್ನು ತಂದು ಮಾರಾಟ ಮಾಡಬಹುದು ಎಂದು ತಿಳಿಸಿದ್ದಾರೆ.

******************

ಬಹುತ್ವ ಭಾರತದಲ್ಲಿ ಸಾಮಾಜಿಕ ಸಾಮರಸ್ಯ ಕಾಪಾಡುವ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಸಕ್ರಿಯ ಪಾತ್ರ ವಹಿಸಬೇಕೆಂದು ಬೆಂಗಳೂರು ನಗರ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಿ.ರಮೇಶ್ ಕರೆ ನೀಡಿದ್ದಾರೆ. ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸೆಂಟ್ರಲ್ ಕಾಲೇಜಿನ ಆವರಣದಲ್ಲಿ ಏರ್ಪಡಿಸಲಾಗಿದ್ದ ಎನ್‌ಎಸ್‌ಎಸ್ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅನೇಕ ಜಾತಿ, ಧರ್ಮ, ಭಾಷೆ ಹಾಗೂ ಆಚಾರ-ವಿಚಾರಗಳ ಆಗರವಾಗಿರುವ ಸಮಾಜದಲ್ಲಿ ಸಮುದಾಯ ಸಹಬಾಳ್ವೆಗೆ ಉಂಟಾಗಿರುವ ತೊಡಕುಗಳನ್ನು ನಿವಾರಿಸಿ ಒಗ್ಗಟ್ಟಿನ ಭಾವನೆ ಮೂಡಿಸುವ ಪ್ರಯತ್ನ ನಿರಂತರವಾಗಿ ನಡೆಯಬೇಕೆಂದು ಅವರು ಅಭಿಪ್ರಾಯಪಟ್ಟಿದ್ದಾರೆ.

******************